**ಬೆಂಗಳೂರು ವಿಶ್ವವಿದ್ಯಾಲಯ**

ಸಂಖ್ಯೆ: ಎಸಿಎ-3/ಎ3/ಸಂ.ನ/2020-21

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 18-03-2021

**ಅಧಿಸೂಚನೆ**

**ವಿಷಯ : 2020-21ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

**ಉಲ್ಲೇಖ: ಕುಲಪತಿಯವರ ಅನುಮೋದನೆ ದಿನಾಂಕ: 17-03-2021**

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2020-21ನೇ ಸಾಲಿಗೆ **ಕೋಡಿಹಳ್ಳಿಯ ಶ್ರೀಮತಿ ಗೌರಮ್ಮ ಮತ್ತು ಶ್ರೀ ಡಿ.ಕೆ. ಕೆಂಪೇಗೌಡ ಸರ್ಕಾರಿ ಪದವಿ ಕಾಲೇಜು,** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಎ. | ಇತಿಹಾಸ ಅರ್ಥಶಾಸ್ತ್ರ ರಾಜ್ಯಶಾಸ್ತ್ರ | 100 (ಒಂದು ನೂರು) |
| | ಇತಿಹಾಸ ಅರ್ಥಶಾಸ್ತ್ರ ಸಮಾಜಶಾಸ್ತ್ರ | 100 (ಒಂದು ನೂರು) |
| | ಇತಿಹಾಸ ಅರ್ಥಶಾಸ್ತ್ರ ಕನ್ನಡ | 40 (ನಲವತ್ತು) |
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |
| ಭಾಷೆಗಳು: ಕನ್ನಡ ಮತ್ತು ಆಂಗ್ಲ | | |

B.B.A - 60

***ವಿ.ಸೂ:*** *2020-21ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು **Defined Parameters** ಗಳನ್ನು ಪೂರೈಸಲು ಕ್ರಮವಹಿಸಿತಕ್ಕದ್ದು.*
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

20/04/2021